File No.AGRI.-ASC/08/2019-AGRI_PLAN_A-AGRICULTURE Secretariat

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಮಟ್ಟದ ಕೃಷಿ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿ ಪ್ರಧಾನ ಸಮಾರಂಭ ಕುರಿತಂತೆ ರಾಜ್ಯದ ವಿವಿಧ ದಿನಪತ್ರಿಕೆಗಳಲ್ಲಿ ನೀಡಲಾದ ಜಾಹೀರಾತು ಸಂಬಂಧ ತಗುಲಿದ ವೆಚ್ಚ ಪಾವತಿಸಲು ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: 1. ಕೃಷಿ ಆಯುಕ್ತರವರ ಪ್ರಸ್ತಾವನೆ ಸಂ. ಕೃವಾವಿ-2/06/ಕೃಪ್ರ&ಕೃಪಂಪ್ರ-ಜಾ/ 2019-20 ದಿನಾಂಕ 10.06.2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ, ಕೃಷಿ ಆಯುಕ್ತರು ದಿನಾಂಕ 06.03.2019 ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಉಪಸ್ಥಿತಿಯಲ್ಲಿ ರಾಜ್ಯ ಮಟ್ಟದ ಕೃಷಿ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿ ಪ್ರಧಾನ ಸಮಾರಂಭದ ಕಾರ್ಯಕ್ರಮದ ಕುರಿತು ವಿವಿಧ ದಿನ ಪತ್ರಿಕೆಗಳಲ್ಲಿ ನೀಡಲಾದ ಜಾಹೀರಾತು ಸಂಬಂಧ ತಗುಲಿದ ವೆಚ್ಚ ರೂ.19,10,117/- (ಹತ್ತೊಂಬತ್ತು ಲಕ್ಷದ ಹತ್ತು ಸಾವಿರದ ಒಂದು ನೂರ ಹದಿನೇಳು ರೂಪಾಯಿಗಳು ಮಾತ್ರ) ಗಳನ್ನು ಇಲಾಖೆಯ ಅಂಗೀಕೃತ ಸಂಸ್ಥೆಯಾದ ಮೆ: ಯಕ್ಷಿ ಕಮ್ಯೂನಿಕೇಷನ್ ಇವರಿಗೆ 2019-20ನೇ ಸಾಲಿನ ಕೃಷಿ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ: 2401-00-102-0-28 ರ ಉಪ ಲೆಕ್ಕ ಶೀರ್ಷಿಕೆ-059 ರಡಿ ಲಭ್ಯವಿರುವ ಅನುದಾನದಿಂದ ಪಾವತಿಸಲು ಆರ್ಥಿಕ ಮಂಜೂರಾತಿ ನೀಡಲು ಕೋರಿರುತ್ತಾರೆ.

ಕೃಷಿ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: File No.AGRI.-ASC/08/2019-AGRI_PLAN_A-AGRICULTURE ಬೆಂಗಳೂರು, ದಿನಾಂಕ 02.08.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ದಿನಾಂಕ 06.03.2019 ರಂದು ರಾಜ್ಯ ಮಟ್ಟದ ಕೃಷಿ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದ ಕುರಿತು ವಿವಿಧ ದಿನಪತ್ರಿಕೆಗಳಲ್ಲಿ ನೀಡಲಾದ ಜಾಹೀರಾತು ಸಂಬಂಧ ತಗುಲಿದ ವೆಚ್ಚ ರೂ.19,10,117/- (ಹತ್ತೊಂಬತ್ತು ಲಕ್ಷದ ಹತ್ತು ಸಾವಿರದ ಒಂದು ನೂರ ಹದಿನೇಳು ರೂಪಾಯಿಗಳು ಮಾತ್ರ) ಗಳನ್ನು ಇಲಾಖೆಯ ಅಂಗೀಕೃತ ಸಂಸ್ಥೆಯಾದ ಮೆ: ಯಕ್ಷಿ ಕಮ್ಯೂನಿಕೇಷನ್ ಇವರಿಗೆ 2019-20ನೇ ಸಾಲಿನ ರಾಜ್ಯ ಮಟ್ಟದ ಕೃಷಿ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ: 2401-00-102-0-28 ರ ಉಪ ಲೆಕ್ಕ ಶೀರ್ಷಿಕೆ-059 ರಡಿ ಲಭ್ಯವಿರುವ ಅನುದಾನದಲ್ಲಿ ವೆಚ್ಚ ಭರಿಸಲು ಅನುಮೋದನೆ ನೀಡಲಾಗಿದೆ.

File No.AGRI.-ASC/08/2019-AGRI_PLAN_A-AGRICULTURE Secretariat

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 18 ಆಂಆಸ 2019 ದಿನಾಂಕ 12.07.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್.ಡಿ. 01 ಟಿ.ಎಫ್.ಪಿ 2019 ದಿನಾಂಕ 04.07.2019(ಭಾ1 ರ ಕ್ರಮ ಸಂಖ್ಯೆ: 1 ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

BSNagaratnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
2/8/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
2. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು
5. ನಿರ್ದೇಶಕರು, ವಾರ್ತಾ ಹಾಗೂ ಸಂಪರ್ಕ ಇಲಾಖೆ, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು-01
6. ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು
7. ನಿರ್ದೇಶಕರು, ಮೆ: ಯಕ್ಷಿ ಕಮ್ಯೂನಿಕೇಶನ್ ಸಂಸ್ಥೆ, No.03, 7th Cross, Off: Railway Parallel Road, Kumar Park West, Bangalore-20.
8. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
9. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬೆಂಗಳೂರು
10. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಎಫ್.ಆರ್.& ಬಿಸಿಸಿ, ವಿಧಾನ ಸೌಧ, ಬೆಂಗಳೂರು
12. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
13. ಸರ್ಕಾರದ ಉಪ ಕಾರ್ಯದರ್ಶಿಗಳು-1 & 2, ಕೃಷಿ ಇಲಾಖೆ ಇವರ ಆಪ್ತ ಶಾಖೆ
14. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.